30-12-20

# ರೂಪಾಂತರಿ ಇದೆ, ಲಾಕ್‌ಡೌನ್ ಇಲ್ಲ!

## ಸಚಿವ ಡಾ.ಸುಧಾಕರ್ ಹೇಳಿಕೆ | ಬ್ರಿಟನ್‌ನಿಂದ ಮರಳಿದ ಮೂವರಲ್ಲಿ ಸೋಂಕು ಪತ್ತೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು 30-12-20

ಬ್ರಿಟನ್‌ನಿಂದ ರಾಜ್ಯಕ್ಕೆ ಮರಳಿದವರ ಪೈಕಿ ಮೂವರಲ್ಲಿ ಹೊಸ ಮಾದರಿ ಕರೊನಾ ವೈರಾಣು ಪತ್ತೆಯಾಗಿದ್ದರೂ ಲಾಕ್‌ಡೌನ್, ಇಡೀ ಪ್ರದೇಶ ಅಥವಾ ಬಡಾವಣೆ ಸೀಲ್‌ಡೌನ್ ಅನಗತ್ಯವೆಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ಹೇಳಿದರು.

ಮಂಗಳವಾರ ಪ್ರಕರಣಗಳು ಹೊರಬಿದ್ದ ಬಳಿಕ ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ತಾಯಿ-ಮಗು, ಮತ್ತೊಬ್ಬ ಮಹಿಳೆಯಲ್ಲಿ ಹೊಸ ಪ್ರಭೇದದ ಸೋಂಕು ಪತ್ತೆಯಾಗಿರುವುದು ಐಸಿಎಂಆರ್ ನೀಡಿದ ಮಾಹಿತಿಯಿಂದ ಗೊತ್ತಾಗಿದೆ. ಬ್ರಿಟನ್‌ನಲ್ಲಿ ಕಾಣಿಸಿಕೊಂಡ ರೂಪಾಂತರಿ ಕರೊನಾ ರಾಜ್ಯದಲ್ಲಿ ಪತ್ತೆಯಾದ ಕಾರಣಕ್ಕೆ ಲಾಕ್‌ಡೌನ್, ಇಡೀ ಪ್ರದೇಶ ಸೀಲ್‌ಡೌನ್ ಅನಗತ್ಯವಾಗಿದೆ. ಕೇಂದ್ರದ ಮಾರ್ಗಸೂಚಿಯಂತೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

**ಶಾಲೆ-ಕಾಲೇಜುಗಳ ಪುನರಾರಂಭ ಅಬಾಧಿತ:** ಬ್ರಿಟನ್‌ನಲ್ಲಿ ಪತ್ತೆಯಾದ ವೈರಸ್ ಪ್ರಕರಣಗಳು ರಾಜ್ಯದಲ್ಲೂ ಪತ್ತೆಯಾಗಿದ್ದರಿಂದ ಆತಂಕ ಇಲ್ಲವೇ ಗಾಬರಿಯಾಗಬೇಕಾದ ಅಗತ್ಯವಿಲ್ಲ. ಈಗಾಗಲೇ ನಿರ್ಧರಿಸಿರುವಂತೆ ಜ.1ರಿಂದ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳು ಪುನರಾರಂಭ ಅಬಾಧಿತವೆಂದು ಹೇಳಿದರು.

ಅಷ್ಟಕ್ಕೂ ಬ್ರಿಟನ್‌ನಿಂದ ವಾಪಸ್ಸಾದ ಎಲ್ಲರಿಗೂ ಕರೊನಾ ಸೋಂಕು ದೃಢಪಟ್ಟಿಲ್ಲ. ತಜ್ಞರು ಹೇಳುವ ಪ್ರಕಾರ ಸಮುದಾಯದಲ್ಲಿ ರೋಗ ನಿರೋಧಕ ಶಕ್ತಿ ವೃದ್ಧಿಸಿದೆ. ಹೀಗಾಗಿ ರೂಪಾಂತರಿ ಕರೊನಾ ಹೆಚ್ಚಾಗಿ ಬಾಧಿಸುವುದಿಲ್ಲವೆಂಬ ಎಂಬ ವಿಶ್ವಾಸ ವ್ಯಕ್ತಪಡಿಸಿದರು.




ಕರೊನಾ ಯಮರ್ಜೆನ್ಸಿ EMERGENCY

ಬೆಂಗಳೂರಿನ ವಸಂತಪುರದಲ್ಲಿ ಸೀಲ್‌ಡೌನ್ ಆಗಿರುವ ಅಪಾರ್ಟ್‌ಮೆಂಟ್.

### ಸಂಪರ್ಕಿತರ ಪತ್ತೆ, ನಿಗಾ

ಯು.ಕೆ.ಯಿಂದ ವಿಮಾನದಲ್ಲಿ ಬಂದವರ ಸಹ ಪ್ರಯಾಣಿಕರು, ಸೋಂಕಿತರ ಪ್ರಥಮ ಮತ್ತು ದ್ವಿತೀಯ ಸಂಪರ್ಕಿತರನ್ನು ಪತ್ತೆ ಹಚ್ಚಿ ಪರೀಕ್ಷಿಸಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಹೋಮ್ ಕ್ವಾರಂಟೈನ್‌ನಲ್ಲಿ ಇರಲು ಸೂಚಿಸಿದ್ದು, ಸರ್ಕಾರ ವಿಫಲವಾಗಿರುವ ಪ್ರಶ್ನೆಯೇ ಉದ್ಭವಿಸದು ಎಂದು ತಳ್ಳಿಹಾಕಿದರು.

### ಏಕರೂಪದ ಮಾಹಿತಿ ವ್ಯವಸ್ಥೆ

ಎಸ್-ಜೀನ್ಸ್ ಸೀಕ್ವೆನ್ಸ್ ಅಧ್ಯಯನಕ್ಕಾಗಿ ದೇಶದಲ್ಲಿ 10 ಪ್ರಯೋಗಾಲಯಗಳನ್ನು ಕೇಂದ್ರ ಸರ್ಕಾರ ಗೊತ್ತುಪಡಿಸಿದ್ದು, ಆ ಪೈಕಿ ಬೆಂಗಳೂರಿನ ಎರಡು ಲ್ಯಾಬ್‌ಗಳು ಸೇರಿವೆ. ಈ ಲ್ಯಾಬ್‌ಗಳಲ್ಲಿ ಪರೀಕ್ಷೆ ಮಾಡಿದ ವರದಿಯನ್ನು ನೇರವಾಗಿ ಐಸಿಎಂಆರ್‌ಗೆ ಕಳುಹಿಸಲಾಗುತ್ತದೆ. ಏಕರೂಪದ ಮಾಹಿತಿ ವ್ಯವಸ್ಥೆಯಾಗಿರುವ ಕಾರಣ ಯಾವುದೇ ಗೊಂದಲಗಳಾಗುವುದಿಲ್ಲ ಎಂಬ ಸಮಜಾಯಿಷಿ ನೀಡಿದರು. ಬ್ರಿಟನ್‌ನಿಂದ ಮರಳಿದವರ ಪೈಕಿ ನೆಗೆಟಿವ್ ವರದಿ ಬಂದವರಿಗೆ ಮನೆಯಲ್ಲೇ ಪ್ರತ್ಯೇಕವಾಗಿರಲು ಸೂಚಿಸಲಾಗಿದೆ. ಕೇಂದ್ರದ ಸೂಚನೆಯಂತೆ 28 ದಿನ ಹೋಮ್ ಕ್ವಾರಂಟೈನ್‌ನಲ್ಲಿ ಇರಬೇಕಾಗುತ್ತದೆ ಎಂದು ಡಾ.ಸುಧಾಕರ್ ಹೇಳಿದರು.

### ಕಠಿಣ ಕ್ರಮದ ಎಚ್ಚರಿಕೆ



ಇಂಗ್ಲೆಂಡ್‌ನಿಂದ ಹಿಂದಿರುಗಿದವರ ಪೈಕಿ ಕೆಲವರು ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡ ಕಾರಣ ಸಂಪರ್ಕ ಸಿಗುತ್ತಿಲ್ಲ. ಅಂತಹವರನ್ನು ಪೊಲೀಸರು ಪತ್ತೆ ಮಾಡುತ್ತಿದ್ದು, 48 ಗಂಟೆ ಗಡುವು ನೀಡಲಾಗಿದೆ. ನಂತರವೂ ಸಿಗದಿದ್ದರೆ ಕಾನೂನು ರೀತ್ಯ ಅಪರಾಧವಾಗುತ್ತದೆ. ವೈಯಕ್ತಿಕ, ಸಮುದಾಯದ ಆರೋಗ್ಯ ರಕ್ಷಣೆ ದೃಷ್ಟಿಯಿಂದ ಪರೀಕ್ಷೆಗೆ ಒಳಗಾಗಲೇಬೇಕು. ಇಲ್ಲವಾದರೆ ಗಡುವು ಮುಗಿದ ಬಳಿಕ ಕಠಿಣ ಕ್ರಮಕೈಗೊಳ್ಳಬೇಕಾಗುತ್ತದೆ ಎಂದು ಡಾ.ಸುಧಾಕರ್ ಎಚ್ಚರಿಸಿದರು.

### ಮೂವರಿಗೆ ಚಿಕಿತ್ಸೆ, ಕ್ರಮ

ಹೊಸ ಮಾದರಿ ಕರೊನಾ ವೈರಸ್ ಸೋಂಕಿತ ಮೂವರಿಗೂ ನಿಮ್ಹಾನ್ಸ್‌ನ ಪ್ರತ್ಯೇಕ ಕೊಠಡಿಯಲ್ಲಿಟ್ಟು ಚಿಕಿತ್ಸೆ ನೀಡಲಾಗುತ್ತಿದೆ. ಬ್ರಿಟನ್‌ನಿಂದ ರಾಜ್ಯಕ್ಕೆ ಹಿಂದಿರುಗಿದ 1,614 ಜನರ ರಕ್ತದ ಮಾದರಿ ಸಂಗ್ರಹಿಸಿ ಪರೀಕ್ಷೆಗೆ ಒಳಪಡಿಸಲಾಗಿತ್ತು. ಇದರಲ್ಲಿ 1588 ಜನರ ಪರೀಕ್ಷಾ ವರದಿ ನೆಗೆಟಿವ್ ಬಂದಿದೆ ಎಂದು ತಿಳಿಸಿದರು. ಬಾಕಿ 26 ಜನರಿಗೆ ಕರೊನಾ ಸೋಂಕು ದೃಢಪಟ್ಟಿದ್ದರಿಂದ ಆಸ್ಪತ್ರೆಯಲ್ಲಿ ಪ್ರತ್ಯೇಕವಾಗಿರಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅಲ್ಲದೆ, ಸೋಂಕಿತರ ರಕ್ತದ ಮಾದರಿಯ ಹೆಚ್ಚಿನ ಅಧ್ಯಯನಕ್ಕಾಗಿ ನಿಮ್ಹಾನ್ಸ್‌ನ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು ಎಂದು ವಿವರಿಸಿದರು.

### ಕೋವಿಡ್‌ಗೆ ನಾಲ್ವರು ಬಲಿ

ರಾಜ್ಯದಲ್ಲಿ ಮಂಗಳವಾರ ನಾಲ್ವರು ಸೋಂಕಿಗೆ ಬಲಿಯಾಗಿದ್ದು, ಮೃತರ ಸಂಖ್ಯೆ 12,074 ತಲುಪಿದೆ. 662 ಹೊಸ ಕರೊನಾ ಸೋಂಕು ಪ್ರಕರಣಗಳು ವರದಿಯಾಗಿದ್ದು, ಸೋಂಕಿತರ ಸಂಖ್ಯೆ 9.17 ಲಕ್ಷ ತಲುಪಿದೆ. 1,344 ಸೋಂಕಿತರ ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ್ದು, ಗುಣಮುಖರ ಸಂಖ್ಯೆ 8.93 ಲಕ್ಷಕ್ಕೆ ಏರಿಕೆಯಾಗಿದೆ. 11,861 ಸಕ್ರಿಯ ಪ್ರಕರಣಗಳಿದ್ದು, 206 ಮಂದಿ ತುರ್ತು ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ಶಾಲೆ-ಕಾಲೇಜು ಆರಂಭಕ್ಕೆ ಸಕಲ ಸಿದ್ಧತೆ

**ಬೆಂಗಳೂರು:** ರಾಜ್ಯದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯು ಹಾಗೂ ವಿದ್ಯಾಗಮ ತರಗತಿಗಳು ಜ.1 ರಿಂದ (ಶುಕ್ರವಾರ) ಆರಂಭವಾಗಲಿದ್ದು, ಇದಕ್ಕೆ ಎಲ್ಲ ರೀತಿಯ ಸಿದ್ಧತೆಗಳು ನಡೆದಿವೆ. ಕಳೆದ ಹತ್ತು ತಿಂಗಳಿಂದ ಮುಚ್ಚಿದ್ದ ಶಾಲೆಗಳು ಜ.1ರಂದು ಆರಂಭವಾಗಲಿದೆ. ಈಗಾಗಲೇ ಶಾಲೆ ಆರಂಭಕ್ಕೆ ಬೇಕಾದ ಸಿದ್ಧತೆಯನ್ನು ಶಿಕ್ಷಣ ಇಲಾಖೆ ಮಾಡಿಕೊಂಡಿದ್ದು, ಸರಳ ರೀತಿಯಲ್ಲಿ ಶಾಲೆ ಆರಂಭೋತ್ಸವ ನಡೆಸಲು ನಿರ್ಧರಿಸಲಾಗಿದೆ. ಜ.1ರಂದು ಎಸ್ಸೆಸ್ಸೆಲ್ಸಿ, ದ್ವಿತೀಯ ಪಿಯುಸಿ ತರಗತಿಗಳ ಜತೆಗೆ ಶಾಲಾ ಆವರಣದಲ್ಲೇ 6ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾಗಮವೂ ನಡೆಯಲಿದೆ. ತರಗತಿ ಹಾಗೂ ವಿದ್ಯಾಗಮಕ್ಕೆ ಸಂಬಂಧಿಸಿದ ವೇಳಾಪಟ್ಟಿ, ವಿದ್ಯಾರ್ಥಿಗಳ ತಂಡ ರಚನೆ ಹಾಗೂ ಸಮಯದ ವಿಂಗಡನೆ ಸೇರಿ ಶೈಕ್ಷಣಿಕವಾಗಿ ಆಗಬೇಕಿರುವ ಎಲ್ಲ ಬಗೆಯ ಕಾರ್ಯದ ಬಗ್ಗೆ ಶಿಕ್ಷಣ ಇಲಾಖೆಯಿಂದ ಸಿದ್ಧತೆ ಮಾಡಿಕೊಳ್ಳಲಾಗಿದೆ.

**» ಕರೊನಾ ಮಾರ್ಗಸೂಚಿ ಪಾಲನೆ ಮಾಡುವಂತೆ ಸೂಚನೆ**

**ಶಾಲೆ ಆರಂಭೋತ್ಸವ:** ಕರೊನಾ ಸಂಕಷ್ಟದ ನಡುವೆ ಶಾಲೆಗೆ ಬರುವ ವಿದ್ಯಾರ್ಥಿಗಳಿಗೆ ಮೊದಲ ದಿನ ಸಕಾರಾತ್ಮಕ ಭಾವನೆ ಮೂಡಿಸುವ ಉದ್ದೇಶದಿಂದ ಸೂಕ್ತ ಮುನ್ನೆಚ್ಚರಿಕಾ ಕ್ರಮದ ಜತೆಗೆ ಶಾಲಾವರಣವನ್ನು ಶೃಂಗಾರಗೊಳಿಸಲು ಶಿಕ್ಷಣ ಇಲಾಖೆ ಜಿಲ್ಲಾ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಮುಖ್ಯ ಶಿಕ್ಷಕರಿಗೆ ಸೂಚಿಸಿದೆ. ಪ್ರತಿ ವರ್ಷ ಮೇ ತಿಂಗಳ ಅಂತ್ಯಕ್ಕೆ ಶಾಲಾರಂಭೋತ್ಸವ ನಡೆಯುತ್ತಿತ್ತು. ಆದರೆ, ಈ ಬಾರಿ ಕರೊನಾ ಭೀತಿ ಇರುವ ಹಿನ್ನೆಲೆಯಲ್ಲಿ ಸರಳವಾಗಿ ಶಾಲಾ ಪ್ರಾರಂಭೋತ್ಸವ ನಡೆಸಲು ಸೂಚಿಸಲಾಗಿದೆ. ಶಾಲಾರಂಭೋತ್ಸವದ ತಯಾರಿ , ಪರಿಶೀಲಿಸಲು ಅಧಿಕಾರಿಗಳನ್ನೂ ನೇಮಿಸಲಾಗಿದೆ. ನೋಡಲ್ ಅಧಿಕಾರಿಗಳೇ ತಮ್ಮ ವ್ಯಾಪ್ತಿಯ ಶಾಲಾ ಹಂತದ ತಯಾರಿಯ ಬಗ್ಗೆ ಪರಿಶೀಲನೆ ನಡೆಸಿ ಇಲಾಖೆಗೆ ವರದಿ ಸಲ್ಲಿಸಬೇಕಿದೆ.

### ಗೊಂದಲ ಬೇಡ

ಹೊಸ ರೂಪದ ಕರೊನಾದಿಂದಾಗಿ ಮತ್ತೆ ಭಯದ ವಾತಾವರಣ ನಿರ್ಮಾಣವಾಗಿದ್ದು, ಶಾಲಾ-ಕಾಲೇಜು ಆರಂಭವಾಗುವ ಬಗ್ಗೆ ವಿದ್ಯಾರ್ಥಿಗಳು ಹಾಗೂ ಪಾಲಕರಲ್ಲಿ ಗೊಂದಲಗಳಿದ್ದವು. ಆದರೆ, ಜ.1 ರಿಂದ ತರಗತಿಗಳನ್ನು ಆರಂಭಿಸಲು ನಿರ್ಧರಿಸಿರುವ ಸರ್ಕಾರ, ಈ ಗೊಂದಲಕ್ಕೆ ತೆರೆ ಎಳೆದಿದೆ. ಕರೊನಾ ಮಾರ್ಗಸೂಚಿಗಳನ್ನು ಸೂಕ್ತ ರೀತಿಯಲ್ಲಿ ಪಾಲನೆ ಮಾಡುವಂತೆ ಎಲ್ಲ ಶಾಲಾ-ಕಾಲೇಜುಗಳಿಗೆ ಕಟ್ಟುನಿಟ್ಟಾಗಿ ಸೂಚನೆ ನೀಡಲಾಗಿದೆ.